ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-2343384

**CHAMUNDESHWARI ELECTRICITY SUPPLY CORPORATION LIMITED**
*(A Government of Karnataka Undertaking)*
Corporate Office,
CESC, Mysuru-570017
**Web Sit:www.cescmysore.org**
E-mail ID:gmhrd@cescmysore.org

Company Identity Number[CIN]:- **U40109KA2004SGC035177**

---

ಕ್ರಮಾಂಕ: ಚಾವಿಸನಿನಿ/ಆ ಮತ್ತು ಮಾಸಂ/04/103/ಇ.64607/2023-24/CYS-1807 ದಿನಾಂಕ: 15.03.2024
ಲಗತ್ತು:02 ಹಾಳೆ

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ವರ್ಗಾವಣಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಬಗ್ಗೆ..

ಉಲ್ಲೇಖ
1. ಸರ್ಕಾರದ ಅಪರ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಸುತ್ತೋಲೆ ಸಂಖ್ಯೆ: ಸಿಆಸುಇ 13 ಸೇನೌವ 2023 ದಿನಾಂಕ: 31.08.2023.
2. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಸುತ್ತೋಲೆ ಸಂಖ್ಯೆ: ಸಿಆಸುಇ 13 ಸೇನೌವ 2023 ದಿನಾಂಕ: 13.02.2024.
3. ಮಾನ್ಯ ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಎನರ್ಜಿ 141 ಇಇಬಿ 2024 ದಿನಾಂಕ: 21.02.2024.

*********

ಉಲ್ಲೇಖ(1)ರ ಸುತ್ತೋಲೆಯಲ್ಲಿ, ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಅನುಸರಿಸಬೇಕಾದ ಕ್ರಮದ ಬಗ್ಗೆ ಸೂಚನೆಗಳನ್ನು ನೀಡಲಾಗಿದ್ದು, ಆದಾಗ್ಯೂ, ಸದರಿ ಸೂಚನೆಗಳನ್ನು ಅನುಸರಿಸದಿರುವುದು ಗಮನಕ್ಕೆ ಬಂದಿದ್ದು. ಈ ಹಿನ್ನಲೆಯಲ್ಲಿ ದಿನಾಂಕ: 31.08.2023ರ ಸುತ್ತೋಲೆಯಲ್ಲಿ ನೀಡಿರುವ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಹಾಗೂ ಪಾಲಿಸದೇ ಇರುವ ಅಧಿಕಾರಿಗಳಿಗೆ ಕೂಡಲೇ ನೋಟೀಸ್ ಜಾರಿ ಮಾಡಲಾಗುವುದೆಂದು ಉಲ್ಲೇಖ(2)ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ರವರು ಸೂಚಿಸಿ ಸುತ್ತೋಲೆ ಹೊರಡಿಸಿರುವುದನ್ನು, ಉಲ್ಲೇಖ(3)ರಲ್ಲಿ ಲಗತ್ತಿಸಿ, ಮಾನ್ಯ ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು ರವರು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿರುವ ಹಿನ್ನಲೆಯಲ್ಲಿ, ಉಲ್ಲೇಖ(1)ರ ಸುತ್ತೋಲೆ ಪ್ರತಿಯನ್ನು ಲಗತ್ತಿಸಿ, ಸದರಿ ಸುತ್ತೋಲೆಯಲ್ಲಿ ನೀಡಿರುವ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ. ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚಿಸಿದೆ.

AGM-2 18/03/2024

ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾಸಂ)
ಚಾವಿಸನಿನಿ., ಮೈಸೂರು.

---



ಪು.ತಿ.ನೋ..

ಪ್ರತಿಗಳು:

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಾರ್ಯಾಲಯ, ಚಾವಿಸನಿನಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಉಪ ಪ್ರಧಾನ ವ್ಯವಸ್ಥಾಪಕರು, ಎಂ.ಐ.ಎಸ್, ನಿಗಮ ಕಾರ್ಯಾಲಯ, ಚಾವಿಸನಿನಿ, ಮೈಸೂರು - ನಿಗಮದ ಜಾಲತಾಣದಲ್ಲಿ ಪ್ರಕಟಿಸಲು.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ.
- ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನ ಉಪವಿಭಾಗ, ಚಾವಿಸನಿನಿ,
- ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ ನಿರ್ದೇಶಕರು(ಹಣಕಾಸು) ರವರ ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಸದರಿ ಅಧಿಕೃತ ಜ್ಞಾಪನವನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ ನಿರ್ದೇಶಕರು(ಹಣಕಾಸು) ರವರ ಗಮನಕ್ಕೆ ತರುವಂತೆ ಕೋರಿದೆ.
- ಸಪ್ರವ್ಯ(ಆ ಮತ್ತು ಮಾಸಂ)/ಪ್ರ.ಕ.

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 13 ಸೇನೌವ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 31-08-2023

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ವರ್ಗಾವಣಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಬಗ್ಗೆ.

ಉಲ್ಲೇಖ: (1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ:07.06.2013
(2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 7 ಸೇನೌವ 2023, ದಿನಾಂಕ:30.05.2023, ದಿನಾಂಕ: 16.06.2023 ಮತ್ತು ದಿನಾಂಕ:30.06.2023

****

1. ಮೇಲಿನ ಉಲ್ಲೇಖ (1) ರಲ್ಲಿನ ದಿನಾಂಕ: 07.06.2013ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳನ್ನು ನಿರ್ದಿಷ್ಟಪಡಿಸಲಾಗಿದೆ. ಸದರಿ ಆದೇಶದ ಕಂಡಿಕೆ 9(ಆ)ರಲ್ಲಿ ಈ ಕೆಳಗಿನಂತೆ ತಿಳಿಸಲಾಗಿರುತ್ತದೆ:

> ಆ. ಆದರೆ ಯಾವುದೇ ರೀತಿಯ ಅವಧಿಪೂರ್ವ ವರ್ಗಾವಣೆಗಳನ್ನು ಹಾಗೂ ಸಾಮಾನ್ಯ ವರ್ಗಾವಣಾ ಅವಧಿ ಮುಗಿದ ನಂತರ ಯಾವುದೇ ವರ್ಗಾವಣೆಗಳನ್ನು ಮತ್ತು ಮೇಲೆ ತಿಳಿಸಿರುವಂತೆ ಸರ್ಕಾರಿ ನೌಕರರು ಒಂದು ಸ್ಥಳದಲ್ಲಿರಬಹುದಾದ ಅವಧಿ ವಿಸ್ತರಿಸಿ ಮಾಡುವ ವರ್ಗಾವಣೆಗಳನ್ನು ಮಾಡುವ ಮುನ್ನ ಸಚಿವಾಲಯದ ಆಡಳಿತ ಇಲಾಖೆಗಳು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆಯನ್ನು ತಪ್ಪದೇ ಪಡೆಯತಕ್ಕದ್ದು. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಯಾವುದೇ ಪ್ರಸಂಗದಲ್ಲಿ ಮೊದಲು ವರ್ಗಾವಣೆಗಳನ್ನು ಮಾಡಿ ನಂತರ ಮಾನ್ಯ ಮುಖ್ಯಮಂತ್ರಿಯವರ ಸ್ಥಿರೀಕರಣ/ಘಟನೋತ್ತರ ಅನುಮೋದನೆ ಪಡೆಯತಕ್ಕದ್ದಲ್ಲ.

2. ಮೇಲಿನ ಉಲ್ಲೇಖ (2)ರಲ್ಲಿನ ದಿನಾಂಕ:30.05.2023, 16.06.2023 ಮತ್ತು 30.06.2023ರ ಸರ್ಕಾರದ ಆದೇಶಗಳಲ್ಲಿ 2023-24ನೇ ಸಾಲಿಗೆ ಗ್ರೂಪ್-ಎ, ಬಿ, ಸಿ ಮತ್ತು ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6 ರಷ್ಟನ್ನು ಮೀರದಂತೆ ದಿನಾಂಕ:01.06.2023 ರಿಂದ 03.07.2023 ರವರೆಗೆ ಸಾರ್ವತ್ರಿಕ ವರ್ಗಾವಣೆಗಳನ್ನು ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

....2

3. ಆದರೆ, ನಿಗದಿತ ವರ್ಗಾವಣಾ ಅವಧಿಯ ನಂತರವೂ ಇಲಾಖಾ ಹಂತದಲ್ಲಿ ವರ್ಗಾವಣೆಗಳನ್ನು ಜಾರಿಗೊಳಿಸಿ ನಂತರ ಘಟನೋತ್ತರ ಅನುಮೋದನೆಗಾಗಿ ಪ್ರಸ್ತಾವನೆಗಳನ್ನು ಸನ್ಮಾನ್ಯ ಮುಖ್ಯಮಂತ್ರಿಯವರಿಗೆ ಸಲ್ಲಿಸಲಾಗುತ್ತಿದ್ದು, ಇದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.

4. ಈ ಹಿನ್ನೆಲೆಯಲ್ಲಿ, ಸಾರ್ವತ್ರಿಕ ವರ್ಗಾವಣಾ ಅವಧಿ ಮುಗಿದಿರುವುದರಿಂದ ಇನ್ನು ಮುಂದೆ ಯಾವುದೇ ಇಲಾಖೆಯಲ್ಲಿ ವರ್ಗಾವಣೆಗಳನ್ನು ಆಡಳಿತಾತ್ಮಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಮಾಡುವುದು ಅತ್ಯಗತ್ಯವಾಗಿದ್ದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಪೂರ್ವಾನುಮೋದನೆಯನ್ನು ಪಡೆಯತಕ್ಕದ್ದು ಎಂದು ಈ ಮೂಲಕ ಸೂಚಿಸಿದೆ. ಒಂದು ವೇಳೆ ಪೂರ್ವಾನುಮೋದನೆಯನ್ನು ಪಡೆಯದೇ ಯಾವುದೇ ವರ್ಗಾವಣೆಗಳನ್ನು ಮಾಡಿದಲ್ಲಿ ಸಂಬಂಧಪಟ್ಟ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರನ್ನು ನೇರ ಜವಾಬ್ದಾರರನ್ನಾಗಿಸಿ ಅವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸುತ್ತಾ, ಸರ್ಕಾರದ ಸೂಚನೆಯನ್ನು ಚಾಚೂತಪ್ಪದೆ ಪಾಲಿಸತಕ್ಕದ್ದೆಂದು ಸ್ಪಷ್ಟಪಡಿಸಿದೆ.

(ಜಿ.ಡಿ.ಮಧುಚಂದ್ರ ತೇಜಸ್ವಿ)
ಸರ್ಕಾರದ ಅಪರ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು,
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು,
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
5. ಎಲ್ಲಾ ಇಲಾಖಾ ಮುಖ್ಯಸ್ಥರು,
6. ಎಲ್ಲಾ ಪ್ರಾದೇಶಿಕ ಆಯುಕ್ತರು,
7. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
8. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
9. ಸಚಿವಾಲಯದ ಎಲ್ಲಾ ಶಾಖೆಗಳು
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.